**All India Radio: Bangalore**
**Regional Bulletin In Kannada**
**18.05.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**18.05.2025 / 6.40 p.m.**
**<><><><>**

ಮುಖ್ಯಾಂಶಗಳು

1. ದೇವನಹಳ್ಳಿ ಐಫೋನ್ ಘಟಕ ಜೂನ್ ತಿಂಗಳಿಂದ ಅಧಿಕೃತವಾಗಿ ಆರಂಭ - ಸಚಿವ ಎಂ ಬಿ ಪಾಟೀಲ್ ಸ್ಪಷ್ಟನೆ
2. ಪಶು ಸಾಕಾಣಿಕೆಯಲ್ಲಿ ಕರ್ನಾಟಕ ದೇಶದಲ್ಲೇ ಪ್ರಥಮ - ೪೦೦ ಪಶುವೈದ್ಯರ ನೇಮಕಕ್ಕೆ ಸರ್ಕಾರ ತೀರ್ಮಾನ
3. ಬೆಂಗಳೂರಿನಲ್ಲಿ ಮಳೆಯಿಂದ ಜಲಾವೃತ ಸಾಯಿ ಲೇಔಟ್ ಸೇರಿದಂತೆ ಹಲವೆಡೆ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಪರಿಶೀಲನೆ
4. ರಾಜ್ಯದ ಕರಾವಳಿ ಜಿಲ್ಲೆಗಳು ಸೇರಿದಂತೆ ಹಲವೆಡೆ ಧಾರಾಕಾರ ಮಳೆ ಸಂಭವ - ಆರೆಂಜ್ ಅಲರ್ಟ್ ಘೋಷಣೆ

<><><><>

ಅಮೇರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೂ ಭಾರತದಲ್ಲಿ ಐಫೋನ್ ಉತ್ಪಾದನೆಗೂ ಸಂಬಂಧವಿಲ್ಲ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ೫೦ ಸಾವಿರ ಉದ್ಯೋಗ ನಿರೀಕ್ಷೆಯ ದೇವನಹಳ್ಳಿ ಐಫೋನ್ ಘಟಕ ಜೂನ್ ತಿಂಗಳಿಂದ ಅಧಿಕೃತವಾಗಿ ಆರಂಭವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಆಪಲ್ ಸಿಇಒ ಟಿಮ್ ಕುಕ್ ಜೂನ್ ತ್ರೈಮಾಸಿಕದಲ್ಲಿ, ಅಮೆರಿಕದಲ್ಲಿ ಮಾರಾಟವಾಗುವ ಹೆಚ್ಚಿನ ಐಫೋನ್‌ಗಳನ್ನು ಭಾರತದಲ್ಲಿ ತಯಾರಿಸಲಾಗುವುದು ಎಂದು ದೃಢಪಡಿಸಿದ್ದಾರೆ. ಈ ಬೆಳವಣಿಗೆಯು ಜಾಗತಿಕ ಉತ್ಪಾದನೆಯಲ್ಲಿ ಕರ್ನಾಟಕದ ಸ್ಥಾನವನ್ನು ಬಲಪಡಿಸುತ್ತದೆ ಎಂದು ಅವರು ಪ್ರತಿಪಾದಿಸಿದ್ದಾರೆ.

<><><><>

ಪಶು ಸಾಕಾಣಿಕೆಯಲ್ಲಿ ದೇಶದಲ್ಲಿ ಕರ್ನಾಟಕ ರಾಜ್ಯ ಪ್ರಥಮ ಸ್ಥಾನದಲ್ಲಿದೆ ಎಂದು ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರಾದ ಕೆ.ವೆಂಕಟೇಶ್ ಅವರು ತಿಳಿಸಿದ್ದಾರೆ. ಹಾಸನ ಜಿಲ್ಲಾ ಪ್ರಾಣಿ ಪ್ರಯೋಗಾಲಯ ಮತ್ತು ಮಾಹಿತಿ ಕೇಂದ್ರದ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು ರಾಜ್ಯದಲ್ಲಿ ಬೆಳಗಾವಿ ಪ್ರಥಮ ಸ್ಥಾನ ಹಾಗೂ ಹಾಸನ ಜಿಲ್ಲೆ ಎರಡನೇ ಸ್ಥಾನದಲ್ಲಿವೆ. ರೈತರಿಗೆ ಪ್ರಯೋಜನವಾಗಲಿ ಎಂದು ಈ ಪ್ರಯೋಗಾಲಯ ನಿರ್ಮಿಸಲಾಗುತಿದ್ದು ಜಿಲ್ಲೆ ಜನತೆ ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ. ೪೦೦ ಪಶು ವೈದ್ಯರನ್ನು ಗುತ್ತಿಗೆ ಆಧಾರದಲ್ಲಿ ತೆಗೆದುಕೊಳ್ಳಲಾಗಿದ್ದು ೭೦೦ ಡಿ ಗ್ರೂಪ್ ನೌಕರರ ನೇಮಿಸಿಕೊಳ್ಳಲು ಈಗಾಗಲೇ ಟೆಂಡರ್ ಕರೆಯಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><><>

ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅವರು ಇಂದು ಬೆಂಗಳೂರಿನ ದೂರದರ್ಶನ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಅವರು,

ಅಧಿಕಾರಿಗಳೊಂದಿಗೆ ದೂರದರ್ಶನ ಕೇಂದ್ರದ ಕಾರ್ಯ ವೈಖರಿ ಕುರಿತು ಚರ್ಚೆ ನಡೆಸಿ, ಮಾಹಿತಿ ಪಡೆದುಕೊಂಡರು. ಕೇಂದ್ರ ವಾರ್ತಾ ಶಾಖೆ, ದೂರದರ್ಶನ ಕೇಂದ್ರ, ಹಾಗೂ ಆಕಾಶವಾಣಿಯ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಇದೇ ವೇಳೆ ಸಚಿವರು ಏಕ್ ಪೇಡ್ ಮಾ ಕೆ ನಾಮ್ ಅಭಯಾನದ ಅಂಗವಾಗಿ ದೂರದರ್ಶನ ಕೇಂದ್ರದಲ್ಲಿ ಗಿಡ ನೆಟ್ಟರು.

<><><>

ಬೆಂಗಳೂರಿನ ಬಿಬಿಎಂಪಿ ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಬರುವ ಸಾಯಿ ಲೇಔಟ್ ಜಲಾವೃತವಾಗುವುದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಕ್ರಮ ಕೈಗೊಳ್ಳಲಾಗುವುದೆಂದು ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ. ಮಳೆಯಿಂದಾಗಿ ಸಮಸ್ಯೆಯಾಗಿರುವ ಪ್ರದೇಶಗಳಿಗೆ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಾಯಿ ಲೇಔಟ್ ಪ್ರದೇಶವನ್ನು ಬಿ.ಡಿ.ಎ. ಅಭಿವೃದ್ಧಿಪಡಿಸಿದ್ದು, ಕೆಲವು ಪ್ರದೇಶಗಳಲ್ಲಿ ತಾತ್ಕಾಲಿಕವಾಗಿ ಜಾಕ್ ವೆಲ್ ವ್ಯವಸ್ಥೆ ಮಾಡಿ ಪಂಪ್ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದ್ದಾರೆ. ಪರಿಶೀಲನೆಯ ವೇಳೆ ಸಾಯಿ ಲೇಔಟ್ ಸ್ಥಳಿಯರ ಅಹವಾಲುಗಳನ್ನು ಆಲಿಸಲಾಗಿದ್ದು, ವಿಪತ್ತು ನಿರ್ವಹಣೆ ಅಡಿ ನೀರು ನುಗ್ಗಿರುವ ಮನೆಗಳನ್ನು ಗುರುತಿಸಿ ಪರಿಹಾರ ನೀಡಲಾಗುವುದು ಎಂದು ಭರವಸೆ ನೀಡಿದ್ದಾರೆ. ಮಾನ್ಯತಾ ಟೆಕ್ ಪಾರ್ಕ್ ಹಾಗೂ ನಾಗವಾರ ಜಂಕ್ಷನ್ ಬಳಿ ಪರಿಶೀಲನೆ ನಡೆಸಿದ ಅವರು ನಾಗವಾರ ಜಂಕ್ಷನ್ ಬಳಿ ಮೆಟ್ರೋ ಕಾಮಗಾರಿ ನಡೆಯುತ್ತಿದೆ ಎಂದು ಸ್ಪಷ್ಟನೆ ನೀಡಿದ್ದಾರೆ.

<><><>

ಪಾಕಿಸ್ತಾನದ ಉಗ್ರರನ್ನು ಸೆದೆಬಡಿಯಲು ಭಾರತೀಯ ಸೇನೆಯು ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಯಶಸ್ವಿಗೊಂಡ ಹಿನ್ನೆಲೆಯಲ್ಲಿ ಭಾರತೀಯ ಸೈನಿಕರುಗಳಿಗೆ ಮೈಸೂರಿನ ಎಲ್ಲಾ ಮಾಜಿ ಸೈನಿಕರ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಎಂದು ಮಾಜಿ ಸೈನಿಕ ಹಾಗೂ ಮಾಜಿ ಸೈನಿಕರ ಮೈಸೂರು ಜಿಲ್ಲಾ ಘಟಕದ ಅಧ್ಯಕ್ಷ ಕೆಪಿ ದಿವಾಕರ್ ತಿಳಿಸಿದ್ದಾರೆ.

**ಧ್ವನಿ : ಕೆಪಿ ದಿವಾಕರ್ (೪೦ ಸೆಕೆಂಡ್‌ಗಳು)**

<><><>

ತುರ್ತು ಸಂದರ್ಭದಲ್ಲಿ ಪರಿಣಾಮಕಾರಿಯಾಗಿ ನಾಗರಿಕರ ರಕ್ಷಣೆ ಮಾಡುವ "ಆಪರೇಷನ್ ಅಭ್ಯಾಸ್" ಅಂಗವಾಗಿ ದಾವಣಗೆರೆಯ ಮಹಾನಗರ ಪಾಲಿಕೆ ಆವರಣದಲ್ಲಿಂದು ಅಣಕು ಪ್ರದರ್ಶನ ನಡೆಸಲಾಯಿತು. ಅಗ್ನಿ ಶಾಮಕ ದಳ, ಆರೋಗ್ಯ ಇಲಾಖೆ ಮತ್ತು ರಾಜ್ಯ ವಿಪತ್ತು ನಿರ್ವಹಣಾ ಘಟಕದ ಸಿಬ್ಬಂದಿಗಳು ಜಾಗೃತಿ ಮೂಡಿಸಿದರು. ಅಣಕು ಕಾರ್ಯಾಚರಣೆಯನ್ನು ಸಾರ್ವಜನಿಕರು ಕುತೂಹಲದಿಂದ ವೀಕ್ಷಿಸಿದರು. ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಭಯೋತ್ಪಾದಕರು ದಾಳಿ ನಡೆಸಿದರೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು, ವಿಜಯಪುರ, ಬಾಗಲಕೋಟೆ ಜಿಲ್ಲಾಡಳಿತದ ಮಾರ್ಗದರ್ಶನದಲ್ಲಿ ಅಣಕು ಪ್ರದರ್ಶನ ನಡೆಯಿತು. ಎರಡೂ ಜಿಲ್ಲೆಯ ಪೊಲೀಸರು, ಕೆಎಸ್‌ಐಎಸ್‌ಎಫ್ ಪೊಲೀಸರು, ಅಗ್ನಿಶಾಮಕ ಸೇರಿದಂತೆ ನಾನಾ ಇಲಾಖೆಗಳು ಸೇರಿ ಅಣಕು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.

<><><>

ಸಾರ್ವಜನಿಕರ ತೆರಿಗೆ ಹಣದಲ್ಲಿ ರಾಜ್ಯ ಸರ್ಕಾರ ೨ ನೇ ವರ್ಷದ ಸಾಧನ ಸಮಾವೇಶ ಮಾಡಲು ಹೊರಟಿದೆ ಎಂದು ವಿರೋಧ ಪಕ್ಷದ ನಾಯಕ ಆರ್. ಆಶೋಕ ದೂರಿದ್ದಾರೆ.  ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,  ಗ್ಯಾರಂಟಿ ಯೋಜನೆಗೆ ಸರ್ಕಾರದಲ್ಲಿ ಹಣವಿಲ್ಲ. ಅಭಿವೃದ್ಧಿ ಕೆಲಸಕ್ಕೂ ಹಣವಿಲ್ಲ ಆದರೆ ಸಮಾವೇಶ, ಸರ್ಕಾರದ ಜಾಹಿರಾತುಗಳಿಗೆ ಹಣ ಬಳಕೆಯಾಗುತ್ತಿದೆ ಎಂದು ಆರೋಪಿಸಿದ್ದಾರೆ.  ಆಪರೇಷನ್ ಸಿಂಧೂರ ಇನ್ನೂ ಮುಗಿದಿಲ್ಲ. ಇಂತಹ ಸಂದರ್ಭದಲ್ಲಿ ಸಮಾವೇಶಗಳು ಅಗತ್ಯವಿದೆಯೆ ಎಂದು ಪ್ರಶ್ನಿಸಿದ್ದಾರೆ.

<><><>

ವೈದ್ಯಕೀಯ ಕ್ಷೇತ್ರದಲ್ಲಿ  ತುರ್ತು ಸಂದರ್ಭಗಳಲ್ಲಿ ಡ್ರೋನ್ ಮೂಲಕ ಔಷಧಿಗಳನ್ನು ತಲುಪಿಸಲು  ಮಾಡುತ್ತಿರುವ ಪ್ರಯತ್ನ ಶ್ಲಾಘನೀಯ ಎಂದು  ಆಹಾರ ಆಯೋಗದ ಅಧ್ಯಕ್ಷ ಡಾ.ಎಚ್.ಕೃಷ್ಣ ತಿಳಿಸಿದ್ದಾರೆ. ಮಂಡ್ಯ ಮಿಮ್ಸ್ ಆಸ್ಪತ್ರೆಯ ಸಭಾಂಗಣದಲ್ಲಿ ಐಕಾಟ್ ಸಂಸ್ಥೆ ವತಿಯಿಂದ ಆಯೋಜಿಸಿದ್ದ  ಮೆಡಿಕಲ್ ಡ್ರೋನ್ ಡ್ರಿಲ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ತುರ್ತು ಆರೋಗ್ಯ ಸೇವೆಗಳನ್ನು ಡ್ರೋನ್ ಮೂಲಕ ಒದಗಿಸಬಹುದು ಎಂಬುದನ್ನು ವಿನೂತನ ಪ್ರಯೋಗದ ಮೂಲಕ ಐಕಾಟ್ ಸಂಸ್ಥೆ ಜಗತ್ತಿಗೆ ಪರಿಚಯಿಸಲು ಹೊರಟಿದೆ.. ತುರ್ತಾಗಿ ನೀಡಬೇಕಾದ ಔಷಧಿಯನ್ನು ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಕಳುಹಿಸಿ ಪ್ರಾಣ ಉಳಿಸಬಹುದಾದ ಈ ಕಾರ್ಯ ವೈದ್ಯಕೀಯ ಕ್ಷೇತ್ರದಲ್ಲಿ ಮಾರ್ಪಾಡು ತರಲಿದೆ ಎಂದು ಹೇಳಿದ್ದಾರೆ.

<><><>

ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಣೆಯಾಗಿದೆ. ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿಯಲ್ಲಿ  ಏರ್ಪಡಿಸಲಾಗಿದ್ದ ಕ್ಷಯಮುಕ್ತ ಭಾರತ ಅಭಿನಂದನಾ ಕಾರ್ಯಕ್ರಮದಲ್ಲಿ ಪಂಚಾಯಿತಿಗೆ ಮಹಾತ್ಮ ಗಾಂಧೀಜಿಯವರ ಪ್ರತಿಮೆ ಮತ್ತು ಅಭಿನಂದನಾ ಪತ್ರ ವಿತರಿಸಿ ಮಾತನಾಡಿದ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ಗ್ರಾಮ ಪಂಚಾಯಿತಿಯ ಕಾಳಜಿ, ಬದ್ಧತೆಯಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ತಿಳಿಸಿದ್ದಾರೆ.

<><><>

ಅರಬ್ಬಿ ಸಮುದ್ರದಲ್ಲಿ ಇದೇ ೨೨ ರಂದು ವಾಯು ಭಾರ ಕುಸಿತ ಉಂಟಾಗಲಿದ್ದು, ಇದರ ಪ್ರಭಾವದಿಂದ ಇದೇ ೧೮ ರಿಂದ ೨೨ರವರೆಗೆ ರಾಜ್ಯದ ವಿವಿಧೆಡೆ ಉತ್ತಮ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><><>

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಶಕ್ತಿ ಯೋಜನೆಯಿಂದ ವಿಜಯನಗರ ಜಿಲ್ಲೆಯ ಸಾರಿಗೆ ನಿಗಮಕ್ಕೆ ಹೆಚ್ಚಿನ ಆದಾಯ ವೃದ್ಧಿಯಾಗಿದೆ ಎಂದು  ಕೆಕೆಎಸ್ಆರ್‌ಟಿಸಿ ಹೊಸಪೇಟೆ ವಿಭಾಗೀಯ ನಿಯಂತ್ರಣಾಧಿಕಾರಿ ತಿಮ್ಮಾರೆಡ್ಡಿ ಹೀರಾ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>